# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 09-03-2021 ಪ್ರಶ್ನೆ ಸಂಖ್ಯೆ : 668(851)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 09-03-2021

ಉತ್ತರಿಸುವ ಸಚಿವರು: ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು

ವಿಷಯ : ಬಡ ಕುಟುಂಬ ನಿವಾಸಿಗಳಿಗೆ ಮನೆ ಹಕ್ಕುಪತ್ರ ನೀಡುವ ಬಗ್ಗೆ

(ಅ) ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು ಪುರಸಭೆ ವ್ಯಾಪ್ತಿಯ 1ನೇ ವಾರ್ಡಿನ ವ್ಯಾಪ್ತಿಯಲ್ಲಿ ಸುಮಾರು ಕಳೆದ 20-25 ವರ್ಷಗಳಿಂದ ವಾಸ ಮಾಡುತ್ತಿರುವ 50-60 ಬಡ ಕುಟುಂಬ ನಿವಾಸಿಗಳಿಗೆ ಇಲ್ಲಿಯವರೆವಿಗೂ ಮನೆ ಹಕ್ಕುಪತ್ರ ವಿತರಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸದರಿ ಕುಟುಂಬಗಳಿಗೆ ಹಕ್ಕುಪತ್ರ ವಿತರಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಇ) ನಾಗಮಂಗಲ ಪುರಸಭೆ 1ನೇ ವಾರ್ಡ್‌ನಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರಿಪಡಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ;

(ಈ) ನಾಗಮಂಗಲ ಪುರಸಭೆ ವ್ಯಾಪ್ತಿಯಲ್ಲಿ ಮನೆ ರಹಿತರಿಗೆ ಹಾಗೂ ಸ್ಲಂ ನಿವಾಸಿಗಳಿಗೆ ಯಾವ ಯಾವ ವರ್ಷಗಳಲ್ಲಿ ಎಷ್ಟು ಮನೆಗಳನ್ನು ಹಂಚಿಕೆ ಮಾಡಲಾಗಿದೆ? (ಫಲಾನುಭವಿಗಳ ಹೆಸರು ಮತ್ತು ವಿಳಾಸ ನೀಡುವುದು)